ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರು(ಆಡಳಿತ) ರವರ ಕಾರ್ಯಾಲಯ ಕಲಬುರಗಿ

ಸಂಖ್ಯೆ:ಸಿ2(4)/ಆಡಳಿತ/ವಿ.ಸ/ಬಡ್ತಿ/114/2020-21

ದಿನಾಂಕ:26-04-2021

## ಅಧಿಸೂಚನೆ

ವಿಷಯ:-ಕಲಬುರಗಿ ಜಿಲ್ಲೆಯ ವ್ಯಾಪ್ತಿಯ ಗ್ರೂಪ-ಡಿ ವೃಂದದ ವಿಜ್ಞಾನ ಸಹಾಯಕ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ದಿನಾಂಕ:01-01-2021 ರಲ್ಲಿದ್ದಂತೆ ಸೇವಾ ಹಿರಿತನದ ಆಧಾರದ ಮೇರೆಗೆ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಕುರಿತು.

ಉಲ್ಲೇಖ:-1)ಕರ್ನಾಟಕ ಸರ್ಕಾರಿ ನೌಕರರ(ಜೇಷ್ಠತಾ)ನಿಯಮಗಳು 1957 ನಿಯಮ(5) ರಂತೆ.
2)ಸರ್ಕಾರಿ ಪತ್ರ ಸಂಖ್ಯೆ:ಇಡಿ 202 ಎಸ್‌ಎಲ್‌ಬಿ 2014 ದಿನಾಂಕ:20-05-2014.
3)ಸರ್ಕಾರಿ ಪತ್ರ ಸಂಖ್ಯೆ:ಇಡಿ 152 ಎಲ್‌ಬಿಪಿ 2014 ದಿನಾಂಕ:20-05-2014.
4)ಸರ್ಕಾರದ ಪತ್ರ ಸಂಖ್ಯೆ:ಡಿ.ಪಿ.ಎ.ಆರ್186ಎಸ್.ಆರ್.ಎಸ್2018 ಬೆಂಗಳೂರು ದಿ:15-05-2019.
5)ಈ ಕಛೇರಿಯ ಅಧಿಸೂಚನೆ ದಿನಾಂಕ:15-02-2021.

- * * * * * -

ಕಲಬುರಗಿ ಜಿಲ್ಲೆಯ ವ್ಯಾಪ್ತಿಯ ಗ್ರೂಪ-ಡಿ ವೃಂದದ ವಿಜ್ಞಾನ ಸಹಾಯಕ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ದಿನಾಂಕ: 01-01-2021 ರಲ್ಲಿದ್ದಂತೆ ಸೇವಾ ಹಿರಿತನದ ಆಧಾರದ ಮೇರೆಗೆ ಈಗಾಗಲೇ ಹೊರಡಿಸಲಾದ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಯಾವುದೇ ಆಕ್ಷೇಪಣೆಗಳು ಸ್ವಿಕೃತವಾಗಿರುವುದಿಲ್ಲ. ಪ್ರಯುಕ್ತ ಅಂತಿಮ ಜೇಷ್ಠತಾ ಪಟ್ಟಿಯನ್ನು ಸಿದ್ಧಗೊಳಿಸಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಪ್ರಕಟಿಸಲಾಗಿದೆ. ಸದರಿ ಪಟ್ಟಿಯನ್ನು ಈ ಕಾರ್ಯಾಲಯದ ವೆಬ್‌ಸೈಟ್ (www.ddpikalaburgi.in)ದಲ್ಲಿ ಗಮನಿಸಬಹುದು.

1) ಮೂಲ ವೃಂದ, ಸ್ಥಳಿಯ ವೃಂದ ಮತ್ತು ಉಳಿದ ಮೂಲ ವೃಂದದ ಅಂತಿಮ ಜೇಷ್ಠತಾ ಪಟ್ಟಿಯಲ್ಲಿನ ನೌಕರರ ಸೇವಾ ಮಾಹಿತಿಯು ಜಿಲ್ಲೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಒದಗಿಸಿರುವ ಮಾಹಿತಿಯನ್ನಾಧರಿಸಿ ಜೇಷ್ಠತಾ ಪಟ್ಟಿಯಲ್ಲಿ ನಿಗದಿಪಡಿಸಿದಂತೆ ಸಿದ್ಧಪಡಿಸಲಾಗಿದೆ.
2) ಮೂಲ ವೃಂದ, ಸ್ಥಳಿಯ ವೃಂದ ಮತ್ತು ಉಳಿದ ಮೂಲ ವೃಂದದ ಅಂತಿಮ ಜೇಷ್ಠತಾ ಪಟ್ಟಿಯಲ್ಲಿನ ನೌಕರರ ಸೇವಾ ವಿವರ ಮಾಹಿತಿ ಜನ್ಮ ದಿನಾಂಕ, ಸೇವೆಗೆ ಸೇರಿದ ದಿನಾಂಕ, ವಿದ್ಯಾರ್ಹತೆ ಮತ್ತು ಜೇಷ್ಠತಾ ಕ್ರಮಾಂಕಗಳ ಪರಿಶೀಲನೆಗೆ ಒಪ್ಪಿಸುವ ಷರತ್ತಿಗೆ ಒಳಪಟ್ಟಿದೆ.
3) ಮೂಲ ವೃಂದ, ಸ್ಥಳಿಯ ವೃಂದ ಮತ್ತು ಉಳಿದ ಮೂಲ ವೃಂದದ ಅಂತಿಮ ಜೇಷ್ಠತಾ ಪಟ್ಟಿಯಲ್ಲಿ ನಮೂದಿಸಿದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ದಾಖಲೆಗಳನ್ನು ಪರಿಶೀಲನೆಗೆ ಒಪ್ಪಿಸುವ ಷರತ್ತಿಗೆ ಒಳಪಟ್ಟಿದೆ. ಹಾಗೂ ಈ ಜೇಷ್ಠತಾ ಪಟ್ಟಿಯಲ್ಲಿ ಯಾವುದೇ ತರಹದ ದೋಷಗಳನ್ನು ಕಂಡು ಬಂದಲ್ಲಿ ಅದನ್ನು ಸರಿಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

ಉಪ ನಿರ್ದೇಶಕರು(ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ
ಕಲಬುರಗಿ
26/4

ಗೆ,

1) ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
2) ಈ ಕಛೇರಿಯ ಇ-ಗೌರ್ನರ್ಸಕ್ಕೆ ಕೊಡುತ್ತಾ ಈ ಕಾರ್ಯಾಲಯದಲ್ಲಿ ವೆಬ್‌ಸೈಟ್‌ದಲ್ಲಿ ಪ್ರಕಟಿಸಲು ತಿಳಿಸಿದೆ.

ಪ್ರತಿಯನ್ನು:-

1) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆಯ ಸಚಿವಾಲಯ ಬಹುಮಹಡಿಗಳ ಕಟ್ಟಡ ಬೆಂಗಳೂರು ಇವರಿಗೆ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
2) ಮಾನ್ಯ ಆಯುಕ್ತರು ಬೆಂಗಳೂರು ಹಾಗೂ ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
3) ಮಾನ್ಯ ನಿರ್ದೇಶಕರು ಅಪರ ಆಯುಕ್ತರ ಕಛೇರಿ ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
4) ಮಾನ್ಯ ಸಹ ನಿರ್ದೇಶಕರು(ಆಡಳಿತ) ಅಪರ ಆಯುಕ್ತರ ಕಛೇರಿ ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.

64MP AI QUAD CAMERA
Shot on realme XT